**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರದೀಪ್ ಶೆಟ್ಟರ್ ಇವರು ಮಂಡಿಸಿರುವ ಶೂನ್ಯ ವೇಳೆ ಪ್ರಸ್ತಾವನೆಗೆ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರ ಉತ್ತರ:**

**"ಹಳೆ ಹುಬ್ಬಳ್ಳಿ ಅಂಗನವಾಡಿಯಲ್ಲಿ ಮಕ್ಕಳಿಗೆ ಮತ್ತು ಬಾಣಂತಿಯರಿಗೆ ವಿತರಿಸಬೇಕಾಗಿದ್ದ ಪೌಷ್ಠಿಕ ಆಹಾರವನ್ನು ಅಕ್ರಮವಾಗಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ಬಗ್ಗೆ."**

*****

ಧಾರವಾಡ ಜಿಲ್ಲೆಯ ಹುಬ್ಬಳ್ಳಿ-ಧಾರವಾಡ (ಶಹರ) ಯೋಜನಾ ವ್ಯಾಪ್ತಿಯ ಹಳೇ ಹುಬ್ಬಳ್ಳಿ ವಲಯದ ಸಮೀಪವಿರುವ ಗಬ್ಬೂರು ಕ್ರಾಸ್ ಬಳಿ ಇರುವ ಆಹಾರ ಗೋದಾಮಿನಲ್ಲಿ ಅಂಗನವಾಡಿ ಫಲಾನುಭವಿಗಳಿಗೆ ವಿತರಿಸುವ ಪೂರಕ ಪೌಷ್ಠಿಕ ಆಹಾರ ಅಕ್ರಮವಾಗಿ ದಾಸ್ತಾನು ಮಾಡಿ ಕಾಳಸಂತೆಯಲ್ಲಿ ಮಾರಾಟ ಮಾಡುತ್ತಿರುವ ಕುರಿತು ಇಲಾಖೆಯ ಜಿಲ್ಲಾಮಟ್ಟದ ಅಧಿಕಾರಿಗಳು, ಕಂದಾಯ ಇಲಾಖೆಯ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಸ್ಥಳೀಯ ಪೊಲೀಸ್ ಠಾಣೆಯಾದ ಕಸಬಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿ, ಸೂಕ್ತ ಕ್ರಮ ಕೈಗೊಳ್ಳಲಾಗಿರುತ್ತದೆ.

ಅಕ್ರಮ ದಾಸ್ತಾನು ಪ್ರಕರಣದಲ್ಲಿ ಭಾಗಿಯಾದ 19 ಅಂಗನವಾಡಿ ಕಾರ್ಯಕರ್ತೆಯರ ಪೈಕಿ 18 ಜನರನ್ನು ಬಂಧಿಸಲಾಗಿದ್ದು, ಒಬ್ಬರು ತಲೆಮರೆಸಿಕೊಂಡಿರುತ್ತಾರೆ ಹಾಗೂ ಇತರೆ ಖಾಸಗಿ 18 ವ್ಯಕ್ತಿಗಳನ್ನು ಸೇರಿ ಒಟ್ಟು 36 ಜನರನ್ನು ಬಂಧಿಸಲಾಗಿದ್ದು, ಪೊಲೀಸ್ ಇಲಾಖೆಯಿಂದ ತನಿಖೆ/ ವಿಚಾರಣೆ ಹಂತದಲ್ಲಿರುತ್ತದೆ.

ಸದರಿ ಪ್ರಕರಣದ ಕುರಿತು ಅಕ್ರಮ ದಾಸ್ತಾನು ಪರಿಶೀಲಿಸದೆ ಇರುವ ಬಗ್ಗೆ, ಕರ್ತವ್ಯ ಲೋಪದ ಮೇರೆಗೆ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಧಾರವಾಡ ಜಿಲ್ಲೆ ಮತ್ತು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಹುಬ್ಬಳ್ಳಿ ಧಾರವಾಡ (ಶಹರ) ಇವರನ್ನು ದಿನಾಂಕ:19.02.2025 ರಂದು ಇಲಾಖಾ ವಿಚಾರಣೆ ಬಾಕಿಯಿರಿಸಿ ಸೇವೆಯಿಂದ ಅಮಾನತ್ತು ಮಾಡಿ ಆದೇಶಿಸಲಾಗಿದೆ.

ಹುಬ್ಬಳ್ಳಿ ಧಾರವಾಡ (ಶಹರ) ಶಿಶು ಅಭಿವೃದ್ಧಿ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಒಬ್ಬ ಪ್ರಥಮ ದರ್ಜೆ ಸಹಾಯಕರು ಹಾಗೂ ಒಬ್ಬ ಮೇಲ್ವಿಚಾರಕಿಯನ್ನು ಕರ್ತವ್ಯಲೋಪದ ಮೇರೆಗೆ ದಿನಾಂಕ:21.02.2025 ರಂದು ಇಲಾಖಾ ವಿಚಾರಣೆ ಬಾಕಿಯಿರಿಸಿ ಸೇವೆಯಿಂದ ಅಮಾನತ್ತು ಮಾಡಿ ಆದೇಶಿಸಲಾಗಿದೆ.

ಮುಂದುವರೆದು ದಿನಾಂಕ:03.03.2025ರಂದು ಸದರಿ ಪ್ರಕರಣದಲ್ಲಿ ಭಾಗಿಯಾಗಿದ್ದ 19 ಅಂಗನವಾಡಿ ಕಾರ್ಯಕರ್ತೆಯರ ಗೌರವ ಸೇವೆಯನ್ನು ಹಿಂಪಡೆಯಲಾಗಿರುತ್ತದೆ ಹಾಗೂ ಪ್ರಸ್ತುತ ಪೊಲೀಸ್ ಇಲಾಖೆಯಲ್ಲಿ ದಾಖಲಾಗಿರುವ ಎಫ್.ಐ.ಆರ್. (FIR) ನಂತೆ ತನಿಖೆ ಪ್ರಗತಿಯಲ್ಲಿರುತ್ತದೆ.

ಸಂಖ್ಯೆ: ಮಮಇ 105 ಎಸ್‌ಜೆಡಿ 2025

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.